ಅ) ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಉತ್ತರ ಕರ್ನಾಟಕ ಅಭಿವೃದ್ಧಿ ಮಂಡಳಿ ರಚಿಸುವ ವಿಚಾರವು ಸರ್ಕಾರದ ಮುಂದಿದೆಯೆ?

ಆ) ಹಾಗಿದ್ದಲ್ಲಿ ಆ ಅಭಿವೃದ್ಧಿ ಮಂಡಳಿಯನ್ನು ರಚಿಸಲು ಕೈಕೊಳ್ಳಲಾದ ಕ್ರಮಗಳೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಯೋಜನೆ ಮತ್ತು ಪ್ರವಾಸೋದ್ಯಮ).—

ಅ) ಇಲ್ಲಾ

ಆ) ಅನ್ವಯಿಸುವುದಿಲ್ಲ.

ಮಂಲ್ಕಿ ಸಹಕಾರಿ ಬ್ಯಾಂಕಿನಲ್ಲಿ ಚಿನ್ನ ಕಳವು

೪೫೭. ಶ್ರೀ ಕೆ. ಸೋಮಣ್ಣ ಸುವರ್ಣ (ಮೂಡಬಿದ್ರೆ).— ಮಾನ್ಯ ಸಹಕಾರ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಂ ಮುಲ್ಕಿ ಸಹಕಾರ ಬ್ಯಾಂಕಿನಲ್ಲಿ ಅಡವಿಟ್ಟಿದ್ದ ಸುಮಾರು ೨೫ ಲಕ್ಷ ರೂಪಾಯಿಗಳ ಬೆಲೆ ಬಾಳುವ ಚಿನ್ನ ಕಳುವಾಗಿ ಒಂದು ವರ್ಷವಾದರೂ ಈವರೆಗೆ ಕಳ್ಳರ ಪತ್ತೆ ಯಾಗಲಿಲ್ಲದ್ದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಪ್ರಕರಣವನ್ನು ಸಿ.ಓ.ಡಿ. ತನಿಖೆಗೆ ಒಳಪಡಿಸಲಾಗುವುದೇ?

ಇ) ಚಿನ್ನ ಕಳೆದುಕೊಂಡವರಿಗೆ ಪರಿಹಾರ ಕೊಡಲಾಗುವುದೇ?

ಈ) ಹಾಗಿದ್ದಲ್ಲಿ ಯಾವಾಗ ಪರಿಹಾರ ಕೊಡಲಾಗುವುದು?

ಶ್ರೀ ಹೆಚ್. ಆರ್. ರಾಜು (ಸಹಕಾರ ಸಚಿವರು).—

ಅ) ಸರ್ಕಾರದವರ ಗಮನಕ್ಕೆ ಬಂದಿದೆ.

ಆ) ಈ ಬಗ್ಗೆ ಏನನ್ನೂ ಯೋಚಿಸಿಲ್ಲ,

ಇ) ಕೊಡಲಾಗುವುದು.

ಈ) ಯುನೈಟೆಡ್ ಇಂಡಿಯಾ ವಿಮೆ ಸಂಸ್ಥೆಯಿಂದ ಪರಿಹಾರ ಬಂದನಂತರ ಚಿನ್ನಕಳೆದುಕೊಂಡವರಿಗೆ ಪರಿಹಾರ ಕೊಡಲಾಗುವುದು?

ಪೋಲೀಸ್ ಇಲಾಖೆಯಲ್ಲಿ ಪೇದೆಗಳ ಕೊರತೆಯ ಬಗ್ಗೆ

೪೫೮. ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ).— ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪೋಲೀಸ್ ಇಲಾಖೆಯಲ್ಲಿ ಪೇದೆಗಳ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಈ ಪೇದೆಗಳ ಕೊರತೆಯನ್ನು ನಿವಾರಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ವೀರೇಂದ್ರ ಪಾಟೀಲ್ (ಮುಖ್ಯ ಮಂತ್ರಿಗಳು).—

ಅ) ಹೌದು.

ಆ) ಪೋಲೀಸ್ ಪೇದೆಗಳ ಸಂಖ್ಯೆ ಕಡಿಮೆ ಇರುವ ಕೆಲವು ಪೋಲೀಸ್ ಠಾಣೆಗಳಲ್ಲಿ ಪೇದೆಗಳ ಸಂಖ್ಯೆಯನ್ನು ಸ್ವಲ್ಪ ಮಟ್ಟಿಗೆ ಹೆಚ್ಚಿಸುವ ಆವಶ್ಯಕತೆ ಸರ್ಕಾರದ ಗಮನಕ್ಕೆ ಬಂದಿದೆ. ಬೆಳವಣಿಗೆ ಹೊಂದುತ್ತಿರುವ ಕೇಂದ್ರಗಳಲ್ಲಿ ಹೊಸದಾಗಿ ಪೋಲೀಸ್ ಠಾಣೆಗಳನ್ನು ರಚಿಸುವ ಬಗ್ಗೆಯೂ ಪ್ರಸ್ತಾವನೆ ಬಂದಿದೆ. ರಾಜ್ಯದ ಆರ್ಥಿಕ ಸಂಪನ್ಮೂಲಗಳನ್ನು ಗಮನದಲ್ಲಿರಿಸಿಕೊಂಡು ಪೋಲೀಸ್ ಕಾನ್ಸ್‌ಟೇಬಲ್‌ಗಳ ಸಂಖ್ಯೆಯನ್ನು ವೃದ್ಧಿಸುವ ಮತ್ತು ಹೊಸ ಪೋಲೀಸ್ ಠಾಣೆಗಳನ್ನು ರಚಿಸುವುದನ್ನು ಹಂತಹಂತವಾಗಿ ಮಂಜೂರು ಮಾಡಬೇಕಾಗಿದೆ.